**ಸಾಕ್ಷಿಯನ್ನು ದಿಃ 07.06.2023 ರಂದು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.**

**ಪಾಟೀ ಸವಾಲುಃ 2 ನೇ ಎದುರುದಾರರ ಪರ ವಕೀಲರಿಂದಃ**

ಅರ್ಜಿದಾರರಿಗೆ ಆಸ್ಪತ್ರೆಗೆ ಯಾರು ಕರೆದುಕೊಂಡು ಹೋಗಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಅಪಘಾತ ಆದ ಎಷ್ಟು ದಿನದ ನಂತರ ಪೋಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದು ನೆನಪಿಲ್ಲ. ದೂರನ್ನು ಯಾರು ದಾಖಲಿಸಿರುತ್ತಾರೆ ಹಾಗೂ ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೋಲೀಸರಿಗೆ ಸ್ಥಳವನ್ನು ಯಾರು ತೋರಿಸಿರುತ್ತಾರೆ, ಸ್ಥಳ ಮಹಜರ್ ಗೆ ಯಾರು ಯಾರು ಸಹಿ ಹಾಕಿರುತ್ತಾರೆ ಎಂದು ನನಗೆ ನೆನಪಿಲ್ಲ. ಪೋಲೀಸರು ಬರೆದ ಸ್ಥಳ ಮಹಜರ್ ಹಾಗೂ ನಕ್ಷೆಗೆ ನಾನು ಸಹಿ ಮಾಡಿರುತ್ತೇನೆ. ಅರ್ಜಿದಾರರು ಊಟಗಳ್ಳಿ ಗ್ರಾಮದವರು, ನಾನು ಅದೇ ಗ್ರಾಮದಲ್ಲಿ ವಾಸವಾಗಿರುತ್ತೇನೆ. ಅರ್ಜಿದಾರರು ನನಗೆ ಸುಮಾರು ವರ್ಷದಿಂದ ಪರಿಚಯ. ನಾನು ಆ ದಿನ ಸ್ಥಳದಲ್ಲಿ ಇರಲಿಲ್ಲ, ಅಪಘಾತ ನೋಡಿರಲಿಲ್ಲ, ಅಪಘಾತದ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರೆ ಸರಿಯಲ್ಲ. ಅತಿವೇಗವಾಗಿ ಬಂದು ಡಿಕ್ಕಿ ಪಡಿಸಿತು ಎನ್ನುವ ವಿಷಯವನ್ನು ಅರ್ಜಿದಾರರಿಗೆ ನನಗೆ ಹೇಳಿದ್ದು ನಾನು ಅದೇ ರೀತಿ ನ್ಯಾಯಾಲಯದಲ್ಲಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಈ ದಿನ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು

ಮತ್ತು ಎಂ.ಎ.ಸಿ.ಟಿ., ಮೈಸೂರು.

**ಸಾಕ್ಷಿಯನ್ನು ದಿಃ 07.06.2023 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 2 ನೇ ಎದುರುದಾರರ ಪರ ವಕೀಲರಿಂದಃ**

ನಾನು ವ್ಯವಸಾಯ ಮಾಡುತ್ತಿದ್ದೇನೆ. ನನ್ನ ಜಮೀನು ಹೂಟಗಳ್ಳಿಯಲ್ಲಿದೆ. ಅರ್ಜಿದಾರರು ನನಗೆ ಪರಿಚಯಸ್ಥರು. ನಾನು ಹೂಟಗಳ್ಳಿಯಲ್ಲಿ ವಾಸವಾಗಿದ್ದೇನೆ. ಅರ್ಜಿದಾರರಿಗೆ ಯಾವ ಬ್ಯಾಂಕ್ ನಲ್ಲಿ ಖಾತೆ ಇತ್ತು ಎಂದು ನನಗೆ ಗೊತ್ತಿಲ್ಲ. ಅರ್ಜಿದಾರನು 2014 ರಲ್ಲಿ ದರ್ಶನ್ ಫ್ಲೆಕ್ಸಿಬಲ್ಸ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದು ತಿಂಗಳಿಗೆ 8,800/- ರುಪಾಯಿ ಹಾಗೂ 2016 ರಲ್ಲಿ ಶಿವ ಆಗ್ರೋ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದು ತಿಂಗಳಿಗೆ 12,000/- ರುಪಾಯಿ ಸಂಬಳ ಪಡೆಯುತ್ತಿದ್ದರು ಎಂದು ಪ್ರಮಾಣ ಪತ್ರದಲ್ಲಿ ಹೇಳಿದ್ದು ಆ ಬಗ್ಗೆ ಯಾವುದೇ ದಾಖಲೆ ನೋಡಿರುವುದಿಲ್ಲ. ನನ್ನ ಹಾಗೂ ಅರ್ಜಿದಾರನ ಮನಗೆ 10 ಮೀಟರ್ ದೂರ ಇದೆ. ಅರ್ಜಿದಾರರು ನಮ್ಮ ಮನೆಯ ಪಕ್ಕದಲ್ಲಿದ್ದು ಸುಮಾರು ವರ್ಷದಿಂದ ಪರಿಚಯ ಇರುವ ಕಾರಣ ಅವರಿಗೆ ಪರಿಹಾರ ಸಿಗಲಿ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಪ್ರಮಾಣ ಪತ್ರದಲ್ಲಿ ಹೇಳಿರುವ ವಿಷಯ ಸುಳ್ಳು ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು
ಮತ್ತು ಎಂ.ಎ.ಸಿ.ಟಿ., ಮೈಸೂರು.